# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 01. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1959 |
| 02. | ಸದಸ್ಯರ ಹೆಸರು | : | ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 03. | ಉತ್ತರಿಸುವ ದಿನಾಂಕ | : | 26.03.2020 |
| 04. | ಉತ್ತರಿಸುವ ಸಚಿವರು | : | ಮಾನ್ಯ ಗೃಹ ಸಚಿವರು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿನ ನ್ಯಾಯಾಲಯಗಳಲ್ಲಿ ಸಹಾಯಕ ಪಬ್ಲಿಕ್ ಪ್ರಾಸಿಕ್ಯೂಟರ್ ಹುದ್ದೆಗಳು ಖಾಲಿ ಇರುವುದರಿಂದ ಪ್ರಕರಣಗಳನ್ನು ಇತ್ಯರ್ಥ ಪಡಿಸಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಬಂದಿದ್ದಲ್ಲಿ, ರಾಜ್ಯದಲ್ಲಿ ಒಟ್ಟು ಎಷ್ಟು ಪಬ್ಲಿಕ್ ಪ್ರಾಸಿಕ್ಯೂಟರ್ / ಸಹಾಯಕ ಪಬ್ಲಿಕ್ ಪ್ರಾಸಿಕ್ಯೂಟರ್ ಹುದ್ದೆಗಳು ಮಂಜೂರಾಗಿವೆ; ಅವುಗಳಲ್ಲಿ ಎಷ್ಟು ಹುದ್ದೆಗಳು ಭರ್ತಿಯಾಗಿವೆ; ಖಾಲಿ ಇರುವ ಹುದ್ದೆಗಳು ಎಷ್ಟು; (ವಿವರ ನೀಡುವುದು) | ಅಭಿಯೋಗಗಳು ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯಲ್ಲಿ ಮಂಜೂರಾದ, ಭರ್ತಿಯಾದ ಮತ್ತು ಖಾಲಿ ಇರುವ ಪಬ್ಲಿಕ್ ಪ್ರಾಸಿಕ್ಯೂಟರ್/ ಸಹಾಯಕ ಪಬ್ಲಿಕ್ ಪ್ರಾಸಿಕ್ಯೂಟರ್ ಹುದ್ದೆಗಳ ವಿವರ ಈ ಕೆಳಗಿನಂತಿದೆ. |
| ಇ) | ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ವಿಳಂಬವಾಗಲು ತೊಂದರೆಗಳೇನು; | |

| ಪದನಾಮ | ಮಂಜೂರಾದ ಹುದ್ದೆಗಳು | ಭರ್ತಿಯಾದ ಹುದ್ದೆಗಳು | ಖಾಲಿಯಿರುವ ಹುದ್ದೆಗಳು | ಷರಾ |
|---|---|---|---|---|
| ಪಬ್ಲಿಕ್ ಪ್ರಾಸಿಕ್ಯೂಟರ್/ ಕಾನೂನು ಅಧಿಕಾರಿ (ಹಿರಿಯ) | 187 | 176 | 11 | -- |
| ಸಹಾಯಕ ಪಬ್ಲಿಕ್ ಪ್ರಾಸಿಕ್ಯೂಟರ್ | 411 | 158 | 253 | ಅ) ಈ ಪೈಕಿ 205 ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ. ಈ ಹುದ್ದೆಗಳು ಭರ್ತಿಯಾಗುವವರೆಗೆ ಈ ಹುದ್ದೆಗಳಿಗೆ ಎದುರಾಗಿ ತಾತ್ಕಾಲಿಕವಾಗಿ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದೆ.<br>ಆ) ಇತ್ತೀಚೆಗೆ ತೆರವಾಗಿರುವ 48 ಹುದ್ದೆಗಳನ್ನು ಸಹ ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ. |

| | | |
|---|---|---|
| ಈ) | ಖಾಲಿ ಇರುವ ಪಬ್ಲಿಕ್ ಪ್ರಾಸಿಕ್ಯೂಟರ್ /ಸಹಾಯಕ ಪಬ್ಲಿಕ್ ಪ್ರಾಸಿಕ್ಯೂಟರ್ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು?<br>(ವಿವರ ಒದಗಿಸುವುದು) | ಪಬ್ಲಿಕ್ ಪ್ರಾಸಿಕ್ಯೂಟರ್ / ಕಾನೂನು ಅಧಿಕಾರಿ (ಹಿರಿಯ) ಹುದ್ದೆಗಳನ್ನು ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಮುಂಬಡ್ತಿ ಮೂಲಕ ಭರ್ತಿ ಮಾಡಲಾಗಿದೆ ಹಾಗೂ ಆಗಿಂದಾಗ್ಗೆ ಖಾಲಿಯಾಗುವ ಹುದ್ದೆಗಳನ್ನು ನಿಯಮಾನುಸಾರ ಮುಂಬಡ್ತಿ ಮೂಲಕ ಭರ್ತಿ ಮಾಡಲಾಗುವುದು.<br>ಸಹಾಯಕ ಪಬ್ಲಿಕ್ ಪ್ರಾಸಿಕ್ಯೂಟರ್ ವೃಂದದ ಹುದ್ದೆಗಳನ್ನು ವೃಂದ ಮತ್ತು ನೇಮಕಾತಿ ನಿಯಮಾನುಸಾರ ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ. ಈ ಹುದ್ದೆಗಳು ಭರ್ತಿಯಾಗುವವರೆಗೆ ಈ ಹುದ್ದೆಗಳಿಗೆ ತಾತ್ಕಾಲಿಕವಾಗಿ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗಿದೆ. |

ಒಇ 89 ಪಿಪಿಇ 2020 (ಇ)

(ಬಸವರಾಜ ಬೊಮ್ಮಾಯಿ)
ಗೃಹ ಸಚಿವರು